7

ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE : 18/6/2020

# ವಿಶ್ವನಾಥ್‌ಗಿಲ್ಲ ಅವಕಾಶ: ಎಂಟಿಬಿ, ಶಂಕರ್‌ಗೆ ಪರಿಷತ್ ಟಿಕೆಟ್

ಪ್ರ.ವಾ. 18-6-2020



ಎಂ.ಟಿ.ಬಿ. ನಾಗರಾಜ್



ಆರ್.ಶಂಕರ್



ಸುನೀಲ್ ವಲ್ಯಾಪುರೆ



ಪ್ರತಾಪ್ ಸಿಂಹ ನಾಯಕ

ಪ್ರಜಾವಾಣಿ ವಾರ್ತೆ

ನವದೆಹಲಿ: ರಾಜ್ಯ ವಿಧಾನ ಪರಿಷತ್‌ಗೆ ಇದೇ 29ರಂದು ನಡೆಯುವ ದ್ವೈವಾರ್ಷಿಕ ಚುನಾವಣೆಗೆ ಬಿಜೆಪಿ ತನ್ನ ಅಭ್ಯರ್ಥಿಗಳನ್ನು ಘೋಷಿಸಿದ್ದು, ಮಾಜಿ ಸಚಿವರಾದ ಎಂಟಿಬಿ ನಾಗರಾಜ್ ಹಾಗೂ ಆರ್.ಶಂಕರ್ ಅವರಿಗೆ ಟಿಕೆಟ್ ನೀಡಿದೆ.

ಆದರೆ, ಜೆಡಿಎಸ್ ತೊರೆದು ಬಿಜೆಪಿ ಸೇರಿ ಹುಣಸೂರಿನಲ್ಲಿ ನಡೆದಿದ್ದ ಉಪಚುನಾವಣೆಯಲ್ಲಿ ಸೋತಿದ್ದ ಮಾಜಿ ಸಚಿವ ಎಚ್.ವಿಶ್ವನಾಥ್ ಅವರನ್ನು ಪರಿಷತ್ ಚುನಾವಣೆಗೆ ಪಕ್ಷ ಪರಿಗಣಿಸಿಲ್ಲ. ಕಲಬುರ್ಗಿಯ ಸುನಿಲ್ ವಲ್ಯಾಪುರೆ ಹಾಗೂ ದಕ್ಷಿಣ ಕನ್ನಡ ಜಿಲ್ಲೆಯ ಪ್ರತಾಪಸಿಂಹ ನಾಯಕ್ ಅವರು ಟಿಕೆಟ್ ಪಡೆದುಕೊಂಡಿರುವ ಇತರ ಅಭ್ಯರ್ಥಿಗಳಾಗಿದ್ದಾರೆ. ನಾಮ ಪತ್ರ ಸಲ್ಲಿಕೆಗೆ ಗುರುವಾರ ಕಡೆಯ ದಿನವಾಗಿದ್ದು, ಕೊನೆಯ ಹಂತದಲ್ಲಿ ಟಿಕೆಟ್ ಘೋಷಿಸಲಾಗಿದೆ.

ಕಾಂಗ್ರೆಸ್ ತೊರೆದು ಬಿಜೆಪಿ ಸೇರಿರುವ ಎಂಟಿಬಿ ನಾಗರಾಜ್ ಉಪ ಚುನಾವಣೆಯಲ್ಲಿ ಸೋತಿದ್ದರೂ, ಪರಿಷತ್‌ಗೆ ಟಿಕೆಟ್ ನೀಡಲಾಗಿದೆ. ಸಮ್ಮಿಶ್ರ ಸರ್ಕಾರದಲ್ಲಿ ಸಚಿವರಾಗಿದ್ದ ಆರ್.ಶಂಕರ್‌ಗೂ ಟಿಕೆಟ್ ದೊರೆತಿದೆ.

ಚಿಂಚೋಳಿಯಿಂದ ಎರಡು ಬಾರಿ ವಿಧಾನಸಭೆ ಸದಸ್ಯರಾಗಿ, ಸಚಿವರಾಗಿದ್ದ ಸುನಿಲ್ ವಲ್ಯಾಪುರೆ ಅವರಿಗೆ ಪರಿಷತ್ ಪ್ರವೇಶಕ್ಕೆ ಅವಕಾಶ ದೊರೆತಿದೆ.